## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಶಶೀಲ್ ಜಿ.ನಮೋಶಿ ಇವರು ಪ್ರಸ್ತಾಪಿಸಿರುವ ಶೂನ್ಯ ವೇಳೆ ಪ್ರಸ್ತಾವನೆಗೆ ಉತ್ತರಿಸುವ ಬಗ್ಗೆ:-

ವಿಷಯ:

ದಿನಾಂಕ:10.07.2023 ರ ಪ್ರಜಾವಾಣಿ ಪತ್ರಿಕೆಯಲ್ಲಿ "ಸರ್ಕಾರಿ ಕಚೇರಿಗಳ ದುರಸ್ತಿಗೂ ದಿಕ್ಕಿಲ್ಲ" ಎಂಬ ಶೀರ್ಷಿಕೆಯಡಿ ಪ್ರಕಟವಾದ ರಾಜ್ಯದಲ್ಲಿರುವ ಪ್ರತಿಯೊಂದು ಜಿಲ್ಲಾ ಹಾಗೂ ತಾಲ್ಲೂಕುಗಳಲ್ಲಿರುವ ವಿಶೇಷವಾಗಿ ಕಲ್ಯಾಣ ಕರ್ನಾಟಕದ ಭಾಗದಲ್ಲಿರುವ ಸಾವಿರಾರು ಸರ್ಕಾರಿ ಕಟ್ಟಡಗಳು, ಶಾಲಾ ಕಾಲೇಜುಗಳ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿವೆ. ಕೆಲವು ಕಚೇರಿಗಳು ನಿಜಾಮರ ಕಾಲದಲ್ಲಿ ನಿರ್ಮಿಸಿದ ಹಳೆಯ ಕಟ್ಟಡಗಳಲ್ಲಿ 75 ವರ್ಷ ಪೂರೈಸಿವೆ, ನಿರ್ವಹಣೆ ಕೊರತೆಯಿಂದ ಕಟ್ಟಡಗಳಲ್ಲಿ ಬಿರುಕು ಕಾಣಿಸಿಕೊಂಡಿದ್ದು, ಮಳೆಯಿಂದಾಗಿ ಛಾವಣಿಗಳಿಂದ ನೀರು ಜಿನುಗುತ್ತಿದೆ.

ಕಲ್ಯಾಣ ಕರ್ನಾಟಕದಲ್ಲಿನ ಎಲ್ಲಾ ಜಿಲ್ಲೆಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ, ಜಿಲ್ಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರ ಕಚೇರಿ, ಡಿಡಿಪಿಯು ಕಚೇರಿ ಸೇರಿದಂತೆ ಅನೇಕ ಕಟ್ಟಡಗಳು ಹಳೆಯದಾಗಿವೆ. ಕಟ್ಟಡದ ಮೇಲ್ಛಾವಣಿಗಳು ಏಕಾಏಕಿ ಮುರಿದು ಬಿದ್ದು, ಅನಾಹುತಗಳಿಗೆ ಕಾರಣವಾಗಿರುವ ಘಟನೆಗಳು ಆಗಾಗ ಕೇಳಿಬರುತ್ತಲೇ ಇವೆ. ಇವುಗಳಿಗೆ ಪರ್ಯಾಯ ವ್ಯವಸ್ಥೆ ಇಲ್ಲದ ಕಾರಣ ಇಲ್ಲಿಯ ಸಿಬ್ಬಂದಿಗಳು ಜೀವ ಭಯದಲ್ಲೇ ಕಚೇರಿಯಲ್ಲಿ ಕುಳಿತು ನೌಕರಿ ಉಳಿಸಿಕೊಳ್ಳಬೇಕಾಗಿದೆ, ಹೈದರಾಬಾದ್ ನಿಜಾಮರ ಕಾಲದಲ್ಲಿ ನಿರ್ಮಿಸಿದ ಕಟ್ಟಡಗಳಲ್ಲೇ ಜಿಲ್ಲೆಯ ಅನೇಕ ಕಚೇರಿಗಳು ಕಾರ್ಯನಿರ್ವಹಿಸುತ್ತಿವೆ. ಅವುಗಳನ್ನು ಸರಿಯಾಗಿ ನಿರ್ವಹಣೆ ಮಾಡಿದ್ದರೆ ಇನ್ನೂ ಕೆಲವು ವರ್ಷ ಬಾಳಿಕೆ ಬರುತ್ತಿದ್ದವು. ಆದರೆ, ನಿರ್ವಹಣೆ ಹಾಗೂ ದುರಸ್ತಿಯನ್ನೂ ಮಾಡದ ಕಾರಣ ಅದು ಶಿಥಿಲಾವಸ್ಥೆಗೆ ತಲುಪಿವೆ.

ಇಲ್ಲಿರುವ ಸಾವಿರಾರು ಶಾಲಾ ಕಟ್ಟಡಗಳು ಕೂಡ ಬಹಳ ವರ್ಷಗಳಾಗಿರುವುದರಿಂದ ಮಳೆ ಬಂದಾಗ ಶಿಥಿಲಗೊಂಡು ಹಾಳಾಗಿವೆ. ಇದರಿಂದಾಗಿ ಶಾಲೆಗೆ ಬರುವ ಮಕ್ಕಳು ಜೀವವನ್ನು ಕೈಯಲ್ಲಿ ಹಿಡಿದುಕೊಂಡು ಪಾಠವನ್ನು ಕೇಳುವ ಪರಿಸ್ಥಿತಿ ಎದುರಾಗಿದೆ. ಈ ಬಗ್ಗೆ ಸರ್ಕಾರಕ್ಕೆ ಆಯಾ ಸರ್ಕಾರಿ ಕಛೇರಿಗಳ ಮೂಲಕ ಮತ್ತು ಶಾಲೆಗಳ ಮೂಲಕ ಹಲವಾರು ಬಾರಿ ದುರಸ್ಥಿಗಾಗಿ ಹಾಗೂ ಹೊಸ ಕಟ್ಟಡಗಳಿಗಾಗಿ ಮನವಿಯನ್ನು ಸಲ್ಲಿಸುತ್ತಾ ಬಂದರೂ ಯಾವುದೇ ಪ್ರಯೋಜನವಾಗಿಲ್ಲ. ಆದ್ದರಿಂದ ರಾಜ್ಯದಲ್ಲಿರುವ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ, ಜಿಲ್ಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರ ಕಚೇರಿ, ಡಿಡಿಪಿಯು ಕಚೇರಿ, ಶಾಲಾ ಕಟ್ಟಡಗಳು ಸೇರಿದಂತೆ ಅನೇಕ ಕಟ್ಟಡಗಳ ದುರಸ್ಥಿ ಹಾಗೂ ನಿರ್ಮಾಣಕ್ಕಾಗಿ ಸರ್ಕಾರವು ಈ ಕೂಡಲೇ ಕ್ರಮವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಿಗೆ ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

ಉತ್ತರ :

1. 2020-21ನೇ ಸಾಲಿಗೆ ಕಲ್ಯಾಣ ಕರ್ನಾಟಕದ ಜಿಲ್ಲೆಗಳಿಗೆ 2 ವರ್ಷದ ಪ್ಯಾಕೇಜ್ ಯೋಜನೆಯಡಿಯಲ್ಲಿ ಕೊಠಡಿಗಳ ನಿರ್ಮಾಣಕ್ಕಾಗಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ರೂ.1374.07 ಹಾಗೂ ಪ್ರೌಢಶಾಲೆಗಳಿಗೆ ರೂ.968.13 ಲಕ್ಷಗಳ ಅನುದಾನ ಹಾಗೂ ಕೊಠಡಿಗಳ ದುರಸ್ಥಿ ಕಾಮಗಾರಿಗಳಿಗೆ ರೂ.32.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.
2. 2021-22ನೇ ಸಾಲಿಗೆ ಕಲ್ಯಾಣ ಕರ್ನಾಟಕದ ಜಿಲ್ಲೆಗಳಿಗೆ ಕೊಠಡಿಗಳ ದುರಸ್ಥಿ ಕಾಮಗಾರಿಗಳಿಗೆ ರೂ.60.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.
3. 2022-23ನೇ ಸಾಲಿಗೆ ಕಲ್ಯಾಣ ಕರ್ನಾಟಕದ ಜಿಲ್ಲೆಗಳಿಗೆ ವಿವೇಕಾ ಶಾಲಾ ಯೋಜನೆಯಡಿ 1360 ಶಾಲಾ ಕೊಠಡಿಗಳ ನಿರ್ಮಾಣ ಕಾರ್ಯಕ್ಕೆ ಒಟ್ಟು ರೂ.2785.14 ಲಕ್ಷಗಳ ಅನುದಾನ ಹಾಗೂ ವಿಶೇಷ ಅಭಿವೃದ್ಧಿ ಯೋಜನೆಯಡಿ 12 ಶಾಲೆಗಳ ದುರಸ್ಥಿ ಕಾರ್ಯಕ್ಕೆ ರೂ.28.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.
4. ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ನೂತನ ಕಟ್ಟಡ, ದುರಸ್ತಿ ಮತ್ತು ಶೌಚಾಲಯ ನಿರ್ಮಾಣ ಸಂಬಂಧ ಒಟ್ಟು ರೂ.1638.40ಲಕ್ಷಗಳ ಅನುದಾನದ ಅವಶ್ಯಕತೆಯಿದ್ದು, ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಆಧರಿಸಿ ನಿರ್ಮಾಣ/ದುರಸ್ತಿಗೊಳಿಸಲು ಕ್ರಮವಹಿಸಲಾಗುವುದು.
5. ರಾಜ್ಯದ ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿನ ಯಾವುದೇ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಕಟ್ಟಡಗಳು ಹಾಗೂ ಡಿಡಿಪಿಯು ಕಚೇರಿಗಳು ಶಿಥಿಲಾವಸ್ಥೆಯಲ್ಲಿರುವುದಿಲ್ಲ. 29 ಕಾಲೇಜುಗಳಲ್ಲಿ ಸಣ್ಣ ಪ್ರಮಾಣದ ದುರಸ್ತಿ ಅವಶ್ಯಕತೆಯಿದ್ದು, ಅನುದಾನದ ಲಭ್ಯತೆ ಆಧರಿಸಿ ದುರಸ್ತಿಗೊಳಿಸಲು ಕ್ರಮವಹಿಸಲಾಗುವುದು.
6. ಒಟ್ಟಾರೆಯಾಗಿ ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಹಾಗೂ ಅಗತ್ಯತೆಗೆ ಅನುಗುಣವಾಗಿ ರಾಜ್ಯದಾದ್ಯಂತ ಹಂತಹಂತವಾಗಿ ಹೆಚ್ಚುವರಿ ಕೊಠಡಿ ನಿರ್ಮಾಣ/ದುರಸ್ಥಿ ಕಾರ್ಯ ಕೈಗೊಳ್ಳಲು ಕ್ರಮವಹಿಸಿದೆ.
7. ಇದಲ್ಲದೇ ಮಹಾತ್ಮಾ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಶಾಲೆಗಳಿಗೆ ಅಗತ್ಯವಿರುವ ಕಟ್ಟಡ ನಿರ್ಮಾಣ/ದುರಸ್ಥಿ/ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು 14 ಮತ್ತು 15ನೇ ಹಣಕಾಸು ಆಯೋಗದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕ್ರಮವಹಿಸಲು ಸುತ್ತೋಲೆ ಸಂಖ್ಯೆ:ಗ್ರಾಅಪಂರಾ 435 ಜಿಪಸ 2021, ದಿನಾಂಕ:08.11.2021ಅನ್ನು ಹೊರಡಿಸಲಾಗಿದೆ.

**ಸಂಖ್ಯೆ : ಇಪಿ 129 ಯೋಸಕ 2023**

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು